**All India Radio: Bangalore**
**National Bulletin In Kannada**
**24.05.2026 19.35 hrs**
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**24.05.2026 19.35 hrs**

---

ಮುಖ್ಯಾಂಶಗಳು

೧. ಅಮೆರಿಕ ವಿದೇಶಾಂಗ ಸಚಿವರೊಂದಿಗೆ ಸಚಿವ ಡಾ.ಎಸ್.ಜೈಶಂಕರ್ ದ್ವಿಪಕ್ಷೀಯ ಮಾತುಕತೆ

೨. ದೋಷರಹಿತ ಮರುಮೌಲ್ಯಮಾಪನ ಪ್ರಕ್ರಿಯೆಗೆ ಸಿಬಿಎಸ್ಇ ಗೆ ಐಐಟಿ ಮದ್ರಾಸ್ ಪರಿಹಾರ

೩. ಪಾಕಿಸ್ತಾನದ ಬಲೂಚಿಸ್ತಾನ್ ಪ್ರಾಂತ್ಯದಲ್ಲಿ ಬಾಂಬ್ ಸ್ಫೋಟ; ಕನಿಷ್ಠ ೨೪ ಜನರು ಸಾವು

೪. ಐಪಿಎಲ್ ಟಿ-೨೦ ಕ್ರಿಕೆಟ್: ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ ಟಾಸ್ ಗೆದ್ದ ಕೊಲ್ಕತ್ತಾ ನೈಟ್ ರೈಡರ್ಸ್ ಫೀಲ್ಡಿಂಗ್ ಆಯ್ಕೆ

---

ನವದೆಹಲಿಯಲ್ಲಿ ಇಂದು ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಮತ್ತು ಅಮೆರಿಕ ವಿದೇಶಾಂಗ ಸಚಿವ ಮಾರ್ಕೊ ರುಬಿಯೊ ದ್ವಿಪಕ್ಷೀಯ ಮಾತುಕತೆ ನಡೆಸಿದರು.

ಉಭಯ ನಾಯಕರು ಭಾರತ-ಅಮೆರಿಕ ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಬಲಬಡಿಸುವ ತಮ್ಮ ಬದ್ಧತೆಯನ್ನು ಪುನರುಚ್ಚರಿಸಿದರು. ಅಲ್ಲದೇ ವ್ಯಾಪಾರ, ಇಂಧನ ಮತ್ತು ಪ್ರಾದೇಶಿಕ ಭದ್ರತೆ ಸೇರಿದಂತೆ ಪ್ರಮುಖ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಹಕಾರ ಕುರಿತು ಚರ್ಚಿಸಿದರು.

ನಿಯೋಗ ಮಟ್ಟದ ಮಾತುಕತೆಗಳ ನಂತರ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಡಾ.ಎಸ್.ಜೈಶಂಕರ್, ಜಾಗತಿಕ ಇಂಧನ ಬೆಲೆಗಳು ಕಡಿಮೆ ಇರುವಂತೆ ಮತ್ತು ಅಡೆತಡೆಯಿಲ್ಲದ

ವಾಣಿಜ್ಯ ವಹಿವಾಟು ನಡೆಯುವಂತೆ ನೋಡಿಕೊಳ್ಳುವಲ್ಲಿ ಭಾರತ ಮತ್ತು ಅಮೆರಿಕ ಎರಡೂ ದೇಶಗಳು ಆಸಕ್ತಿ ಹೊಂದಿವೆ ಎಂದು ಹೇಳಿದರು.

ಅಮೆರಿಕ, ಇಸ್ರೇಲ್, ಇರಾನ್ ಹಾಗೂ ಇತರ ಗಲ್ಫ್ ರಾಷ್ಟ್ರಗಳೊಂದಿಗೆ ಬಲವಾದ ಸಂಬಂಧವನ್ನು ಹೊಂದಿರುವ ವಿಶ್ವದ ಕೆಲವೇ ದೇಶಗಳಲ್ಲಿ ಭಾರತವೂ ಒಂದು. ಭಾರತ ಈ ಪ್ರದೇಶದಲ್ಲಿ ಶಾಂತಿ ಮತ್ತು ಸ್ಥಿರತೆ, ಭಾರತೀಯ ವಲಸಿಗರ ಕಲ್ಯಾಣ ಮತ್ತು ಕಡಿಮೆ ಇಂಧನ ಬೆಲೆಗಳನ್ನು ಬಯಸುತ್ತದೆ ಎಂದು ಅವರು ಪುನರುಚ್ಚರಿಸಿದರು.

---

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ನಾಳೆ ೨೦೨೮ ರ ಪದ್ಮ ಪ್ರಶಸ್ತಿಗಳನ್ನು ಪ್ರದಾನ ಮಾಡಲಿದ್ದಾರೆ. ರಾಷ್ಟ್ರಪತಿ ಭವನದಲ್ಲಿ ನಡೆಯಲಿರುವ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ರಾಷ್ಟ್ರಪತಿಗಳು, ಪದ್ಮವಿಭೂಷಣ, ಪದ್ಮಭೂಷಣ ಮತ್ತು ಪದ್ಮಶ್ರೀ ಪ್ರಶಸ್ತಿಗಳನ್ನು ಪ್ರದಾನ ಮಾಡಲಿದ್ದಾರೆ ಎಂದು ಕೇಂದ್ರ ಗೃಹ ಸಚಿವಾಲಯ ತಿಳಿಸಿದೆ.

ಈ ವರ್ಷ ಭಾರತ ಸರ್ಕಾರ ಒಟ್ಟು ೧೩೧ ಪದ್ಮ ಪ್ರಶಸ್ತಿಗಳನ್ನು ಘೋಷಿಸಿದೆ. ಇವುಗಳಲ್ಲಿ ಐದು ಪದ್ಮವಿಭೂಷಣ, ೧೩ ಪದ್ಮಭೂಷಣ ಮತ್ತು ೧೧೩ ಪದ್ಮಶ್ರೀ ಪ್ರಶಸ್ತಿಗಳು ಸೇರಿವೆ. ಪ್ರಶಸ್ತಿ ಪುರಸ್ಕೃತರಲ್ಲಿ ೧೯ ಮಹಿಳೆಯರು ಸೇರಿದ್ದಾರೆ. ೧೮ ವ್ಯಕ್ತಿಗಳಿಗೆ ಮರಣೋತ್ತರವಾಗಿ ಪ್ರಶಸ್ತಿ ನೀಡಲಾಗುತ್ತದೆ.

ಕಲೆ, ಸಾಹಿತ್ಯ, ಶಿಕ್ಷಣ, ಕ್ರೀಡೆ, ವೈದ್ಯಕೀಯ, ಸಮಾಜ ಕಾರ್ಯ, ವಿಜ್ಞಾನ ಮತ್ತು ಎಂಜಿನಿಯರಿಂಗ್, ಸಾರ್ವಜನಿಕ ವ್ಯವಹಾರಗಳು, ಕೈಗಾರಿಕೆ ಸೇರಿದಂತೆ ವಿವಿಧ ಕ್ಷೇತ್ರಗಳು ಮತ್ತು ವಿಭಾಗಗಳಲ್ಲಿ ವಿಶಿಷ್ಟ ಮತ್ತು ಅಸಾಧಾರಣ ಸಾಧನೆ ಮಾಡಿದವರನ್ನು ಗುರುತಿಸಲು ಈ ಪ್ರಶಸ್ತಿಯನ್ನು ನೀಡಲಾಗುತ್ತದೆ.

---

ಕೇಂದ್ರೀಯ ಪ್ರೌಢ ಶಿಕ್ಷಣ ಮಂಡಳಿಯು ಯಾವುದೇ ದೋಷಗಳಿಲ್ಲದ ಮರುಮೌಲ್ಯಮಾಪನ ಪ್ರಕ್ರಿಯೆಯನ್ನು ಖಚಿತಪಡಿಸಿಕೊಳ್ಳಲು ನೆರವಾಗುವಂತೆ, ಐಐಟಿ ಮದ್ರಾಸ್‌ನ ಪ್ರಾಧ್ಯಾಪಕರು

ಮತ್ತು ತಾಂತ್ರಿಕ ತಜ್ಞರ ತಂಡವನ್ನು ನಿಯೋಜಿಸಲು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ನಿರ್ದೇಶನ ನೀಡಿದ್ದಾರೆ.

ಸಿಬಿಎಸ್‌ಇ ಫಲಿತಾಂಶದ ನಂತರದ ಸೇವಾ ಪೋರ್ಟಲ್ ಕುರಿತು ವಿದ್ಯಾರ್ಥಿಗಳು ಮತ್ತು ಪೋಷಕರು ವ್ಯಕ್ತಪಡಿಸಿದ ಕಳವಳಗಳು ಮತ್ತು ಇತ್ತೀಚಿನ ಬೆಳವಣಿಗೆಗಳನ್ನು ಗಮನದಲ್ಲಿಟ್ಟುಕೊಂಡು ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಐಐಟಿ ಮದ್ರಾಸ್‌ನ ತಜ್ಞರ ತಂಡ, ಸುಧಾರಣೆಗಳನ್ನು ಜಾರಿಗೆ ತರಲಿದೆ ಮತ್ತು ವಿಶೇಷವಾಗಿ ಪೋರ್ಟಲ್‌ನ ಸ್ಥಿರತೆ ಹಾಗೂ ಸರ್ವರ್ ಕಾರ್ಯಕ್ಷಮತೆಯನ್ನು ಪರಿಶೀಲಿಸಲಿದೆ ಎಂದು ಕೇಂದ್ರ ಶಿಕ್ಷಣ ಸಚಿವಾಲಯ ತಿಳಿಸಿದೆ.

---

ಕೇಂದ್ರೀಯ ಪ್ರೌಢ ಶಿಕ್ಷಣ ಮಂಡಳಿ-ಸಿಬಿಎಸ್‌ಇ ಈ ತಿಂಗಳ ೨೦ ಮತ್ತು ೨೨ರಂದು ೧೨ನೇ ತರಗತಿಯ ಫಲಿತಾಂಶದ ನಂತರದ ಪ್ರಕ್ರಿಯೆಯಲ್ಲಿ ತಾಂತ್ರಿಕ ಸಮಸ್ಯೆಯಿಂದ ತಪ್ಪಾದ ಶುಲ್ಕ ಕಡಿತವಾದ ವಿಷಯಕ್ಕೆ ಸಂಬಂಧಿಸಿದಂತೆ ಪರಿಷ್ಕರಣೆಯನ್ನು ಪ್ರಕಟಿಸಿದೆ.

ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಗಳಿಗೆ ಅರ್ಜಿ ಸಲ್ಲಿಸುವ ವೇಳೆ ಈ ಸಮಸ್ಯೆ ಸಂಭವಿಸಿದೆ. ಕೆಲವು ಸಂದರ್ಭಗಳಲ್ಲಿ ಅಗತ್ಯಕ್ಕಿಂತ ಹೆಚ್ಚು ಹಣ ಕಡಿತವಾಗಿದ್ದರೆ, ಇನ್ನೂ ಕೆಲವು ಸಂದರ್ಭಗಳಲ್ಲಿ ಕಡಿಮೆ ಮೊತ್ತ ಕಡಿತಗೊಂಡಿದೆ. ಹೆಚ್ಚುವರಿ ಹಣ ಕಡಿತಗೊಂಡಿರುವ ಎಲ್ಲಾ ಪ್ರಕರಣಗಳಲ್ಲಿ, ನಿಖರ ಮೊತ್ತವನ್ನು ಪಾವತಿಗೆ ಬಳಸಿದ ಅದೇ ವಿಧಾನಕ್ಕೆ ಮರುಪಾವತಿ ಮಾಡಲಾಗುವುದು. ಅದೇ ರೀತಿ, ಕಡಿಮೆ ಹಣ ಕಡಿತಗೊಂಡಿರುವ ಪ್ರಕರಣಗಳಲ್ಲಿ, ಅಗತ್ಯವಿದ್ದರೆ ಉಳಿದ ಮೊತ್ತವನ್ನು ಪಾವತಿಸುವ ಕುರಿತು ಅಭ್ಯರ್ಥಿಗಳಿಗೆ ಪ್ರತ್ಯೇಕವಾಗಿ ಮಾಹಿತಿ ನೀಡಲಾಗುವುದು ಎಂದು ಸಿಬಿಎಸ್‌ಇ ತಿಳಿಸಿದೆ.

ಇದೇ ವೇಳೆ, ಇಂತಹ ಪ್ರಕರಣಗಳಲ್ಲಿ ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಗಳನ್ನು ಒದಗಿಸಲು ಅಭ್ಯರ್ಥಿಗಳು ಹೊಸದಾಗಿ ಅರ್ಜಿ ಸಲ್ಲಿಸುವ ಅಗತ್ಯವಿಲ್ಲ ಎಂದು ಸಿಬಿಎಸ್‌ಇ ಸ್ಪಷ್ಟಪಡಿಸಿದೆ.

---

ಪಶ್ಚಿಮ ಬಂಗಾಳದಲ್ಲಿ, ಫಾಲ್ಟಾ ವಿಧಾನಸಭಾ ಕ್ಷೇತ್ರದ ಮರುಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿ ದೇಬಾಂಗ್ಶು ಪಾಂಡಾ ಭರ್ಜರಿ ಜಯ ಸಾಧಿಸಿದ್ದಾರೆ. ಪಾಂಡಾ ಅವರು ಒಂದು ಲಕ್ಷ ಒಂಬತ್ತು ಸಾವಿರಕ್ಕೂ ಹೆಚ್ಚು ಮತಗಳಿಂದ ಗೆದ್ದಿದ್ದಾರೆ.

ಸಿಪಿಎಂ ಅಭ್ಯರ್ಥಿ ಶಂಭುಂತ್ ಕುರ್ಮಿ, ನಲವತ್ತು ಸಾವಿರದ ಆರುನೂರಕ್ಕೂ ಹೆಚ್ಚು ಮತಗಳೊಂದಿಗೆ ಎರಡನೇ ಸ್ಥಾನ ಪಡೆದರು. ಕಾಂಗ್ರೆಸ್ ಅಭ್ಯರ್ಥಿ ಅಬ್ದುರ್ ರಜಾಕ್ ಮೊಲ್ಲಾ ಮೂರನೇ ಸ್ಥಾನ ಮತ್ತು ತೃಣಮೂಲ ಕಾಂಗ್ರೆಸ್ ಅಭ್ಯರ್ಥಿ ಜಹಾಂಗೀರ್ ಖಾನ್, ಏಳು ಸಾವಿರದ ಏಳು ನೂರಕ್ಕೂ ಹೆಚ್ಚು ಮತಗಳೊಂದಿಗೆ ನಾಲ್ಕನೇ ಸ್ಥಾನ ಪಡೆದರು.

ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಯ ಮತದಾನದ ಸಮಯದಲ್ಲಿ ದೊಡ್ಡ ಪ್ರಮಾಣದ ಅವ್ಯವಹಾರದ ಆರೋಪದ ನಂತರ ಚುನಾವಣಾ ಆಯೋಗ, ಫಾಲ್ಟಾದಲ್ಲಿ ಮರುಚುನಾವಣೆಗೆ ಆದೇಶಿಸಿತ್ತು. ಈ ತಿಂಗಳ ೨೧ ರಂದು ಮರುಚುನಾವಣೆ ನಡೆಸಲಾಯಿತು.

---

ಪಾಕಿಸ್ತಾನದ ಬಲೂಚಿಸ್ತಾನ್ ಪ್ರಾಂತ್ಯದಲ್ಲಿ ಇಂದು ಸಂಭವಿಸಿದ ಪ್ರಬಲ ಬಾಂಬ್ ಸ್ಫೋಟದಲ್ಲಿ ಕನಿಷ್ಠ ೨೪ ಜನರು ಸಾವನ್ನಪ್ಪಿದ್ದು, ಹಲವರು ಗಾಯಗೊಂಡಿದ್ದಾರೆ.

ಬಲೂಚಿಸ್ತಾನ್ ಪ್ರಾಂತ್ಯದ ರಾಜಧಾನಿ ಕ್ವೆಟ್ಟಾದ ಚಮನ್ ಫಾಟಕ್ ರೈಲು ನಿಲ್ದಾಣದ ಸಮೀಪ ಈ ಸ್ಫೋಟ ಸಂಭವಿಸಿದೆ. ಸ್ಫೋಟದಲ್ಲಿ ಒಂದು ರೈಲು ಭಾಗಶಃ ಹಾನಿಗೊಳಗಾಗಿದ್ದು, ಆ ಪ್ರದೇಶದಲ್ಲಿ ನಿಲ್ಲಿಸಲಾಗಿದ್ದ ೧೦ ವಾಹನಗಳು ಸಹ ಹಾನಿಗೊಳಗಾಗಿವೆ.

ಘಟನೆಯ ನಂತರ, ಕ್ವೆಟ್ಟಾದ್ಯಂತ ಸರ್ಕಾರಿ ಆಸ್ಪತ್ರೆಗಳಲ್ಲಿ ತುರ್ತು ಪರಿಸ್ಥಿತಿ ಘೋಷಿಸಲಾಗಿದೆ.

ಬಲೂಚ್ ಲಿಬರೇಶನ್ ಆರ್ಮಿಯ 'ಮಜೀದ್ ಬ್ರಿಗೇಡ್' ದಾಳಿಯ ಹೊಣೆ ಹೊತ್ತುಕೊಂಡಿದೆ. ರೈಲಿನಲ್ಲಿ ಪ್ರಯಾಣಿಸುತ್ತಿದ್ದ ಪಾಕಿಸ್ತಾನಿ ಸೇನಾ ಸಿಬ್ಬಂದಿಯನ್ನು ಗುರಿಯಾಗಿಸಿಕೊಂಡು ನಿರ್ದಿಷ್ಟವಾಗಿ ದಾಳಿ ನಡೆಸಲಾಗಿದೆ ಎಂದು ಹೇಳಿದೆ.

ಸ್ಫೋಟ ಸಂಭವಿಸಿದಾಗ ರೈಲಿನಲ್ಲಿ ೩೦೦ಕ್ಕೂ ಹೆಚ್ಚು ಪಾಕಿಸ್ತಾನಿ ಸೇನಾ ಸಿಬ್ಬಂದಿ ಇದ್ದರು ಎಂದು ವರದಿಯಾಗಿದೆ.

---

ಉಕ್ರೇನ್‌ನ ಕೈವ್ ಮೇಲೆ ರಷ್ಯಾ ನಡೆಸಿದ ದಾಳಿಯಲ್ಲಿ ಇಬ್ಬರು ಸಾವನ್ನಪ್ಪಿದ್ದಾರೆ. ಬೃಹತ್ ಡ್ರೋನ್ ಮತ್ತು ಕ್ಷಿಪಣಿ ದಾಳಿಯ ಸಮಯದಲ್ಲಿ ರಷ್ಯಾ ತನ್ನ ಶಕ್ತಿಶಾಲಿ ಹೈಪರ್‌ಸಾನಿಕ್ ಒರೆಶ್ನಿಕ್ ಬ್ಯಾಲಿಸ್ಟಿಕ್ ಕ್ಷಿಪಣಿಯನ್ನು ಬಳಸಿದೆ ಎಂದು ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಹೇಳಿದ್ದಾರೆ.

ತೀವ್ರವಾದ ವೈಮಾನಿಕ ದಾಳಿಯು ರಾಜಧಾನಿ ಕೈವ್‌ನಾದ್ಯಂತ ಕಟ್ಟಡಗಳನ್ನು ಹಾನಿಗೊಳಿಸಿದೆ. ದಾಳಿಯಲ್ಲಿ ೭೦ ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ ಎಂದು ಉಕ್ರೇನ್ ಅಧಿಕಾರಿಗಳು ತಿಳಿಸಿದ್ದಾರೆ.

ಪರಮಾಣು ಅಥವಾ ಸಾಂಪ್ರದಾಯಿಕ ಸಿಡಿತಲೆಗಳನ್ನು ಹೊತ್ತೊಯ್ಯುವ ಸಾಮರ್ಥ್ಯವಿರುವ ಒರೆಶ್ನಿಕ್ ಕ್ಷಿಪಣಿಯು ಕೈವ್ ಪ್ರದೇಶದ ಬಿಲಾ ತ್ಸೆರ್ಕ್ವಾ ನಗರಕ್ಕೂ ಹಾನಿ ಮಾಡಿದೆ ಎಂದು ವೊಲೊಡಿಮಿರ್ ಝೆಲೆನ್ಸ್ಕಿ ಮಾಹಿತಿ ನೀಡಿದ್ದಾರೆ.

ಒರೆಶ್ನಿಕ್ ಕ್ಷಿಪಣಿಯ ಬಳಕೆಯನ್ನು ರಷ್ಯಾದ ರಕ್ಷಣಾ ಸಚಿವಾಲಯ ದೃಢಪಡಿಸಿದೆ. ಉಕ್ರೇನ್‌ನ ಮಿಲಿಟರಿ ಕಮಾಂಡ್ ಮತ್ತು ನಿಯಂತ್ರಣ ಸೌಲಭ್ಯಗಳು, ವಾಯುನೆಲೆಗಳು ಮತ್ತು ಮಿಲಿಟರಿ-ಕೈಗಾರಿಕಾ ಉದ್ಯಮಗಳನ್ನು ಗುರಿಯಾಗಿಸಿಕೊಂಡಯ ದಾಳಿ ನಡೆಸಲಾಗಿದೆ. ರಷ್ಯಾದ ಭೂಪ್ರದೇಶದಲ್ಲಿನ ನಾಗರಿಕ ಸೌಲಭ್ಯಗಳ ಮೇಲೆ ಇತ್ತೀಚೆಗೆ ಉಕ್ರೇನ್ ನಡೆಸಿದ ದಾಳಿಗೆ ಪ್ರತೀಕಾರವಾಗಿ ಈ ದಾಳಿಯನ್ನು ನಡೆಸಲಾಗಿದೆ ಎಂದು ರಷ್ಯಾ ರಕ್ಷಣಾ ಸಚಿವಾಲಯ ತಿಳಿಸಿದೆ.

---

ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ನೇತೃತ್ವದಲ್ಲಿ ಬೆಂಗಳೂರಿನಲ್ಲಿಂದು ಪಕ್ಷದ ಹಿರಿಯ ನಾಯಕರ ಸಭೆ ನಡೆಯಿತು.

ಈ ವೇಳೆ ಪಕ್ಷದ ರಾಜ್ಯ ಉಸ್ತುವಾರಿ ರಾಧಾ ಮೋಹನ್ ದಾಸ್ ಅಗರ್‌ವಾಲ್, ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ, ವಿಧಾನ

ಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಸೇರಿದಂತೆ ಪಕ್ಷದ ಸಂಸದರು, ಶಾಸಕರು, ಪದಾಧಿಕಾರಿಗಳು ಉಪಸ್ಥಿತರಿದ್ದರು.

ಈ ವೇಳೆ ಮಾತನಾಡಿದ ನಿತಿನ್ ನಬಿನ್, ದೇಶದಲ್ಲಿ ಬಿಜೆಪಿ ಪಕ್ಷ ಶೂನ್ಯದಿಂದ ೨ ಸಾವಿರಕ್ಕೂ ಹೆಚ್ಚು ಶಾಸಕರನ್ನು ಗೆಲ್ಲಿಸುವ ಮಟ್ಟಕ್ಕೆ ಬೆಳೆದಿದೆ. ಜನಪರ ಕಾರ್ಯಗಳ ಮೂಲಕ ಜನರ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸಬೇಕಾಗುತ್ತಿದೆ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಜನರ ನಂಬಿಕೆ ಉಳಿಸಿಕೊಳ್ಳಲು ವಿಫಲವಾಗಿದೆ ಎಂದು ಆರೋಪಿಸಿದರು.

---

ಕೊಲ್ಕತ್ತಾದ ಈಡನ್ ಗಾರ್ಡನ್ಸ್‌ನಲ್ಲಿ ನಡೆಯುತ್ತಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯ ದಿನದ ಎರಡನೇ ಪಂದ್ಯದಲ್ಲಿ ಕೊಲ್ಕತ್ತಾ ನೈಟ್ ರೈಡರ್ಸ್ ಹಾಗೂ ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಮುಖಾಮುಖಿಯಾಗಿವೆ.

ಟಾಸ್ ಗೆದ್ದ ಕೊಲ್ಕತ್ತಾ ನೈಟ್ ರೈಡರ್ಸ್ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

---

ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ನಾಳೆಯಿಂದ ಮೂರು ದಿನಗಳ ಕಾಲ ಭಾರತೀಯ ಉದ್ಯಮ ನಾಯಕರ ನಿಯೋಗದೊಂದಿಗೆ ಕೆನಡಾಗೆ ಭೇಟಿ ನೀಡಲಿದ್ದಾರೆ.

ಈ ಸಂದರ್ಭದಲ್ಲಿ ಅವರು, ಒಟ್ಟಾವಾ ಮತ್ತು ಟೊರಾಂಟೋ ನಗರಗಳಲ್ಲಿ ವ್ಯಾಪಾರ ಮತ್ತು ಹೂಡಿಕೆ ಕುರಿತಂತೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ.

ಭಾರತ-ಕೆನಡಾ ಸಮಗ್ರ ಆರ್ಥಿಕ ಸಹಭಾಗಿತ್ವ ಒಪ್ಪಂದ-ಸಿಇಪಿಎ ಕುರಿತ ಮಾತುಕತೆಯನ್ನು ವೇಗಗೊಳಿಸುವುದು ಈ ಭೇಟಿಯ ಪ್ರಮುಖ ಉದ್ದೇಶವಾಗಿದೆ.

__________ ಮುಕ್ತಾಯ __________